ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು,ದಿನಾಂಕ:04.10.2023

ಸಂಖ್ಯೆ:DCE/BUD/GCC/4/2023

**ಇವರಿಗೆ:**

**ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ**
**ಎಲ್ಲಾ ಜಂಟಿ ನಿರ್ದೇಶಕರುಗಳು /**
**ಸರ್ಕಾರಿ ಪ್ರಥಮ ದರ್ಜೆ ಪ್ರಾಂಶುಪಾಲರುಗಳು**

ವಿಷಯ: ಇಲಾಖಾ ವ್ಯಾಪ್ತಿಯ ಸರ್ಕಾರಿ / ಖಾಸಗಿ ಅನುದಾನಿತ ಕಾಲೇಜುಗಳ ಬೋಧಕರು /ತತ್ಸಮಾನ ವೃಂದದವರುಗಳ AGP ವೃತ್ತಿ ಪದೋನ್ನತಿ ಬಾಕಿಯನ್ನು ಸರ್ಕಾರದ ಮುಂದಿನ ಆದೇಶದವರೆಗೆ ಸೆಳೆಯದಿರುವ ಬಗ್ಗೆ.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಇಡಿ 147 ಡಿಸಿಇ 2022 (ಇ) ದಿನಾಂಕ:03.11.2022.

*******

ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಪತ್ರದಲ್ಲಿ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಪ್ರಾಧ್ಯಾಪಕರುಗಳಿಗೆ / ಸಹ ಪ್ರಾಧ್ಯಾಪಕರುಗಳಿಗೆ / ಪ್ರಾಧ್ಯಾಪಕರುಗಳಿಗೆ / ಇತರರಿಗೆ ಯುಜಿಸಿ ಮಾರ್ಗಸೂಚಿಗಳನ್ವಯ AGP ವೃತ್ತಿ ಪದೋನ್ನತಿಯಡಿ ನೀಡುವ ಸಂದರ್ಭದಲ್ಲಿ ಆರ್ಥಿಕ ಸೌಲಭ್ಯವನ್ನು ಇಲಾಖಾ ಆದೇಶ ಹೊರಡಿಸಿದ ದಿನಾಂಕದಿಂದ ಭವಿಷ್ಯಾರ್ಥಿಯಾಗಿ ಪಾವತಿಸುವಂತೆ ಸೂಚಿಸಲಾಗಿದೆ.

ಆದಾಗ್ಯೂ ಇಲಾಖಾ ವ್ಯಾಪ್ತಿಯ ಕಾಲೇಜುಗಳ ಬೋಧಕರು / ತತ್ಸಮಾನ ವೃಂದದವರು ಈ ಬಗ್ಗೆ ಸ್ಪಷ್ಟೀಕರಣ ಕೋರುತ್ತಿದ್ದು ಸರ್ಕಾರದ ಮುಂದಿನ ಆದೇಶದವರಗೆ AGP AREEARS ಅನ್ನು ಸೆಳೆಯಬಾರದೆಂದು ಕಟ್ಟುನಿಟ್ಟಾಗಿ ಸೂಚಿಸಲಾಗಿದೆ. ಸರ್ಕಾರದ ಆದೇಶ ಉಲ್ಲಂಘನೆ ಕಂಡುಬಂದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರು / ಜಂಟಿ ನಿರ್ದೇಶಕರನ್ನು ಹೊಣೆಗಾರರನ್ನಾಗಿಸಿ ನಿಯಮಾನುಸಾರ ಕ್ರಮ ಜರುಗಿಸಲಾಗುವುದು.

ತಮ್ಮ ವಿಶ್ವಾಸಿ

**ನಿರ್ದೇಶಕರು**
ಕಾಲೇಜು ಶಿಕ್ಷಣ ಇಲಾಖೆ

ಪ್ರತಿಗಳನ್ನು:-

1. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು –ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
2. ಕಛೇರಿ ಪ್ರತಿ